(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು):** ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಅಧ್ಯಕ್ಷರು :** ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**ಅನುಬಂಧ–1**

**ಆ) ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕ 2009**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :** ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು)** : ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯದಲ್ಲಿ ಘೋಷಣೆ ಮಾಡಿರುವ ವಿಷಯದಲ್ಲಿ ಮೂರು ವಿಚಾರಗಳನ್ನು ಬಿಟ್ಟು ಹೋಗಿದ್ದವು. ಅದಕ್ಕೆ ಮಾನ್ಯ ರಾಜ್ಯಪಾಲರಿಂದ ಆದ್ಯಾದೇಶವನ್ನು ದಿನಾಂಕ: 04–06–2009ರಲ್ಲಿ ಹೊರಡಿಸಲಾಗಿತ್ತು. ಅದು Apartment ಮತ್ತು plotಗಳಿಗೆ ತಗಲುವ ಮುದ್ರಾಂಕ ಶುಲ್ಕವನ್ನು 7 1/2 ನಿಂದ ಶೇ. 6ಕ್ಕೆ ಇಳಿಸುವುದು, ಅದೇ ರೀತಿ ವಿಮೆಗೆ ಒಳಪಟ್ಟ, ವರ್ಗಾವಣೆಗೆ ಒಳಪಟ್ಟ, ವರ್ಗಾವಣೆ ಪತ್ರಗಳ ಮೇಲೆ ಮುದ್ರಾಂಕ ಶುಲ್ಕವನ್ನು ಶೇ. 7 1/2 ರಿಂದ ಶೇ. 6ಕ್ಕೆ ಇಳಿಸುವುದು, ಅದೇ ರೀತಿ ಸ್ಥಿರಾಸ್ತಿಗಳ ಮಾರಾಟ ಮಾಡಲು ಪ್ರತಿನಿಧಿಗೆ ಅಧಿಕಾರವನ್ನು ನೀಡಿದ ಪಕ್ಷದಲ್ಲಿ ಜಿಪಿಎ ಮುದ್ರಾಂಕ ಶುಲ್ಕವನ್ನು ಕ್ರಯಪತ್ರಗಳಿಗೆ ಅನ್ವಯವಾಗುವಂತೆ ಶೇ.7 1/2 ಯಿಂದ ಶೇ.6ಕ್ಕೆ ಇಳಿಸುವುದು. ಈ ಮೂರು ವಿಷಯಗಳನ್ನು ಸೇರಿಸುವುದಕ್ಕೆ Ordinance ಆಗಿದೆ. ಅದನ್ನು replace ಮಾಡುವುದಕ್ಕೆ ಈ ವಿಧೇಯಕ, ಈ ವಿಧೇಯಕಕ್ಕೆ ಈ ಸದನ ಒಪ್ಪಿಗೆ ಕೊಡಬೇಕೆಂದು ಕೋರುತ್ತೇನೆ.

**ಅಧ್ಯಕ್ಷರು** : ಇದು stamp duty ಯನ್ನು ಕಡಿಮೆ ಮಾಡುವುದು.

**ಅಧ್ಯಕ್ಷರು** : ಪ್ರಸ್ತಾವ ಏಕೆಂದರೆ,

"2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ರಿಂದ 3ರವರೆಗೆ**

**ಅಧ್ಯಕ್ಷರು** : "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

(ಖಂಡ 2 ರಿಂದ 3ರವರೆಗೆ ಎರಡು ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಅಧ್ಯಕ್ಷರು :** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :** ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಅಧ್ಯಕ್ಷರು :** ಪ್ರಸ್ತಾವನೆ ಏನೆಂದರೆ,

"2009ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಸೂದೆಗೆ ಒಪ್ಪಿಗೆ ನೀಡಲಾಯಿತು**

**ಅನುಬಂಧ–2**